# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 459 |
| **ಮಾನ್ಯ ಸದಸ್ಯರ ಹೆಸರು** | : | ಶ್ರೀ. ಆರ್ ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) |
| **ವಿಷಯ** | : | KSTDC ನಿಗಮದಲ್ಲಿ ಅನುಕಂಪದ ಆಧಾರದ ಮೇಲೆ ಸ್ವೀಕರಿಸಿರುವ ಅರ್ಜಿಗಳ ಕುರಿತು. |
| **ಉತ್ತರಿಸುವ ಸಚಿವರು** | : | ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು. |
| **ಉತ್ತರಿಸುವ ದಿನಾಂಕ:** | : | 06-03-2020. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| 1 | ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ (KSTDC) ಹಾಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು? ಹೆಸರು, ಹುದ್ದೆಯ ಪದನಾಮ, ವೇತನ ಶ್ರೇಣಿ, ತಿಂಗಳಿಗೆ ಪಡೆಯುತ್ತಿರುವ ಮಾಸಿಕ ವೇತನದೊಂದಿಗೆ ವಿವರವಾದ ಮಾಹಿತಿ ನೀಡುವುದು? | ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತದಲ್ಲಿ 166 ಜನ ಖಾಯಂ ನೌಕರರಿದ್ದು, ಇವರ ಹೆಸರು, ಹುದ್ದೆಯ ಪದನಾಮ, ವೇತನ ಶ್ರೇಣಿ, ತಿಂಗಳಿಗೆ ಪಡೆಯುತ್ತಿರುವ ಮಾಸಿಕ ವೇತನದ ವಿವರವನ್ನು ಅನುಬಂಧ-1 ರಲ್ಲಿ ಒದಗಿಸಲಾಗಿದೆ. |
| 2 | ಸದರಿ ನಿಗಮದಲ್ಲಿ ಗುತ್ತಿಗೆಯಡಿ ಕಾರ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು? ಹೆಸರು ಹುದ್ದೆಯ ಪದನಾಮ, ತಿಂಗಳಿಗೆ ಪಡೆಯುತ್ತಿರುವ ಮಾಸಿಕ ವೇತನದೊಂದಿಗೆ ವಿವರವಾದ ಮಾಹಿತಿ ನೀಡುವುದು? | ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತದಲ್ಲಿ 467 ಜನ ಗುತ್ತಿಗೆ ನೌಕರರಿದ್ದು, ಹೆಸರು, ಹುದ್ದೆಯ ಪದನಾಮ, ತಿಂಗಳಿಗೆ ಪಡೆಯುತ್ತಿರುವ ಮಾಸಿಕ ವೇತನದ ವಿವರವನ್ನು ಅನುಬಂಧ-2 ರಲ್ಲಿ ಒದಗಿಸಲಾಗಿದೆ. |
| 3 | ನಿಗಮದಲ್ಲಿ ಅನುಕಂಪ ಆಧಾರದ ಮೇಲೆ ಕೆಲಸ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು? ಇವುಗಳಲ್ಲಿ ಎಷ್ಟು ಜನರಿಗೆ ಉದ್ಯೋಗ ನೀಡಲಾಗಿದೆ? ಬಾಕಿ ಉಳಿದಿರುವ ಅಭ್ಯರ್ಥಿಗಳೆಷ್ಟು? ಅರ್ಜಿ ಸಲ್ಲಿಸಿರುವ ದಿನಾಂಕ ಹಾಗೂ ವಿಳಾಸದೊಂದಿಗೆ ಮಾಹಿತಿ ನೀಡುವುದು? | ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತದಲ್ಲಿ ಅನುಕಂಪ ಆಧಾರದ ಮೇಲೆ ಕೆಲಸ ಕೋರಿ 44 ಅರ್ಜಿಗಳು ಸ್ವೀಕೃತವಾಗಿವೆ. ಸರ್ಕಾರದ ಮಾನದಂಡಗಳನ್ವಯ ಪರಿಶೀಲಿಸಿ 28 ಜನರಿಗೆ ಉದ್ಯೋಗ ನೀಡಲಾಗಿದೆ. ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ ದಿನಾಂಕ ಮತ್ತು ವಿಳಾಸದ ಮಾಹಿತಿಯನ್ನು ಅನುಬಂಧ-3 ರಲ್ಲಿ ಒದಗಿಸಲಾಗಿದೆ. |
| 4 | ಸರ್ಕಾರ ಯಾವ ಕಾಲ ಮಿತಿಯೊಳಗೆ ಈ ನೊಂದ ಕುಟುಂಬಗಳಿಗೆ ನ್ಯಾಯ ದೊರಕಿಸುವುದು? | ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತದಲ್ಲಿ ಅರ್ಹ ಅರ್ಜಿದಾರರಿಗೆ ಉದ್ಯೋಗವನ್ನು ನೀಡಲಾಗಿದ್ದು, ಯಾವುದೇ ಅರ್ಜಿಗಳು ಬಾಕಿ ಇರುವುದಿಲ್ಲ. |

ಕಡತ ಸಂಖ್ಯೆ: ಟಿಓಆರ್ 38 ಟಿಡಿವಿ 2020

(ಸಿ.ಟಿ.ರವಿ)
ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.